# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ,ಬಿ.ಹೆಚ್. ರಸ್ತೆ,ತುಮಕೂರು-572 103 ☎:0816-2254546 ಫ್ಯಾಕ್ಸ್:0816-2270719

ಸಂಖ್ಯೆ:ತುವಿ:19 ನೇ ಘಟಿಕೋತ್ಸವ:2025-26:1325 ದಿನಾಂಕ:13.03.2026

UUCMS

## : ಅಧಿಸೂಚನೆ :

ವಿಷಯ: ತುಮಕೂರು ವಿಶ್ವವಿದ್ಯಾನಿಲಯದ 19ನೇ ವಾರ್ಷಿಕ ಘಟಿಕೋತ್ಸವಕ್ಕೆ ಅರ್ಜಿಗಳನ್ನು ಆಹ್ವಾನಿಸುವ ಬಗ್ಗೆ.

ಉಲ್ಲೇಖ: ಮಾನ್ಯ ಕುಲಪತಿಯವರ ಅನುಮೋದನೆಯ ದಿನಾಂಕ:09.03.2026

*******

ತುಮಕೂರು ವಿಶ್ವವಿದ್ಯಾನಿಲಯದ 19 ನೇ ವಾರ್ಷಿಕ ಘಟಿಕೋತ್ಸವಕ್ಕೆ ಪ್ರವೇಶ ಪಡೆಯುವ ಸಂಬಂಧ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಪ್ರಸ್ತುತ ಯು.ಯು.ಸಿ.ಎಂ.ಎಸ್. ತಂತ್ರಾಂಶದಲ್ಲಿ ನಿರ್ವಹಿಸಲ್ಪಟ್ಟ ವಿವಿಧ ಸ್ನಾತಕ ಪದವಿ ಮತ್ತು ಸ್ನಾತಕೋತ್ತರ ಪದವಿಗಳಲ್ಲಿ ಈ ಕೆಳಕಂಡ ಮಾಹೆಗಳಲ್ಲಿ ನಡೆದ ಪರೀಕ್ಷೆಗಳಲ್ಲಿ ಅರ್ಹತೆ ಹೊಂದಿದ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

1. **ಜನವರಿ/ಫೆಬ್ರವರಿ 2025 ರಿಂದ ಜುಲೈ/ಆಗಸ್ಟ್ 2025 ರವರೆಗೆ ನಡೆದ ಸ್ನಾತಕ ಪದವಿ ಪರೀಕ್ಷೆಗಳನ್ನು ತೆಗೆದುಕೊಂಡು ಪದವಿ ಪೂರ್ಣಗೊಳಿಸಿರುವ ಅಭ್ಯರ್ಥಿಗಳು.**
2. **ಫೆಬ್ರವರಿ/ಮಾರ್ಚ್ 2025 ರಿಂದ ಅಕ್ಟೋಬರ್ 2025 ರವರೆಗೆ ನಡೆದ ಸ್ನಾತಕೋತ್ತರ ಪದವಿ ಪರೀಕ್ಷೆಗಳನ್ನು ತೆಗೆದುಕೊಂಡು ಪದವಿ ಪೂರ್ಣಗೊಳಿಸಿರುವ ಅಭ್ಯರ್ಥಿಗಳು.**

ಈ ಮೇಲ್ಕಂಡ ಅಭ್ಯರ್ಥಿಗಳು ತಮ್ಮ ಯು.ಯು.ಸಿ.ಎಂ.ಎಸ್. ತಂತ್ರಾಂಶದ ಲಾಗಿನ್ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಸದರಿ ಅಭ್ಯರ್ಥಿಗಳು ಅರ್ಜಿಗಳನ್ನು ಸಲ್ಲಿಸಿದ ನಂತರ ಕಾಲೇಜು/ವಿಭಾಗಗಳಿಗೆ ಅರ್ಜಿಯ ಪ್ರತಿಯನ್ನು ಸಲ್ಲಿಸುವುದು.

**ಪದವಿ ಪ್ರಮಾಣ ಪತ್ರಗಳಿಗೆ ನಿಗದಿಪಡಿಸಿದ ಶುಲ್ಕದ ವಿವರ ಕೆಳಕಂಡಂತಿದೆ:**

| | | |
|---|---|---|
| 1. | ಭಾರತೀಯ ವಿದ್ಯಾರ್ಥಿಗಳು | : ರೂ. 550-00/- |
| 2. | ವಿದೇಶಿ ವಿದ್ಯಾರ್ಥಿಗಳು | : ರೂ. 2,050-00/- |

ಒಂದೊಮ್ಮೆ ಅಭ್ಯರ್ಥಿಯು "ವಿಶಿಷ್ಟ ಚೇತನ" ರಾಗಿದ್ದರೆ, ಈ ಸಂಬಂಧ ಸರ್ಕಾರಿ ಜಿಲ್ಲಾ ಆಸ್ಪತ್ರೆಯ ಶಸ್ತ್ರಚಿಕಿತ್ಸಕ ಅಧಿಕಾರಿಗಳಿಂದ ನೀಡಲ್ಪಟ್ಟ ಪ್ರಮಾಣಪತ್ರವನ್ನು ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರಿಂದ ದೃಢೀಕರಿಸಿ ಅರ್ಜಿಯೊಂದಿಗೆ ಲಗತ್ತಿಸಿ ಸಲ್ಲಿಸಬೇಕು.

ಯಾವುದಾದರೂ ಅರ್ಹ ಅಭ್ಯರ್ಥಿಯು ತಮ್ಮ ಯು.ಯು.ಸಿ.ಎಂ.ಎಸ್. ಲಾಗಿನ್‌ನಲ್ಲಿ ಅರ್ಜಿ ಸಲ್ಲಿಸಲು ಸಾಧ್ಯವಾಗದಿದ್ದಲ್ಲಿ, ಫಲಿತಾಂಶಗಳನ್ನು ತಡೆಹಿಡಿಯಲಾಗಿದ್ದರೆ, ಅಂತಹ ಅಭ್ಯರ್ಥಿಯು ಘಟಿಕೋತ್ಸವಕ್ಕೆ ಅರ್ಜಿ ಸಲ್ಲಿಸುವ ಮುನ್ನ ಪರೀಕ್ಷಾ ವಿಭಾಗವನ್ನು ಸಂಪರ್ಕಿಸಿ, ಸೂಕ್ತ ತಿದ್ದುಪಡಿ ಮಾಡಿಸಿಕೊಂಡು, ಫಲಿತಾಂಶ ಬಿಡುಗಡೆಯಾದ ನಂತರವಷ್ಟೇ ಘಟಿಕೋತ್ಸವಕ್ಕೆ ಅರ್ಜಿ ಸಲ್ಲಿಸತಕ್ಕದ್ದು.

ಅಭ್ಯರ್ಥಿಗಳಿಗೆ ಸ್ನಾತಕ ಪದವಿ ಮತ್ತು ಸ್ನಾತಕೋತ್ತರ ಪದವಿಗಳಲ್ಲಿ ಸುವರ್ಣಲೇಪಿತ ಬೆಳ್ಳಿ ಪದಕ/ನಗದು ಬಹುಮಾನಗಳನ್ನು ಘೋಷಿಸಲಾಗಿದ್ದರೆ, ಅಂತಹ ಅಭ್ಯರ್ಥಿಗಳು 19 ನೇ ವಾರ್ಷಿಕ ಘಟಿಕೋತ್ಸವಕ್ಕೆ **'ಖುದ್ದು ಹಾಜರಾಗುವ'** ಅರ್ಜಿಗಳನ್ನು ಸಲ್ಲಿಸಬೇಕು. ಇಲ್ಲವಾದರೆ ಅಂತಹ ಅಭ್ಯರ್ಥಿಗಳು ಘಟಿಕೋತ್ಸವದಲ್ಲಿ ಅವುಗಳನ್ನು ಸ್ವೀಕರಿಸಲು ಅನರ್ಹರಾಗುತ್ತಾರೆ. ಮುಂದೆ ಅವರು ಅವುಗಳನ್ನು ಪಡೆಯಬಯಸಿದರೆ ಮಾನ್ಯ ಕುಲಸಚಿವರು(ಪರೀಕ್ಷಾಂಗ) ಇವರ ಕಚೇರಿಯಿಂದ ಪಡೆದುಕೊಳ್ಳಬೇಕಾಗುತ್ತದೆ.

ಆನ್‌ಲೈನ್‌ನಲ್ಲಿ ಭರ್ತಿ ಮಾಡಿದ ಮುದ್ರಿತ ಅರ್ಜಿಗಳನ್ನು ಪರಿಶೀಲಿಸಿ ಸಹಿ ಮಾಡಿ, ದೃಢೀಕೃತ ಅಂಕಪಟ್ಟಿ ಹಾಗೂ ಇತ್ಯಾದಿಗಳೊಂದಿಗೆ ತಮ್ಮ ಕಾಲೇಜುಗಳ ಪ್ರಾಂಶುಪಾಲರಿಗೆ ಹಾಗೂ ವಿಭಾಗದ ಮುಖ್ಯಸ್ಥರಿಗೆ **ಅದೇ ದಿನ** ಸಲ್ಲಿಸತಕ್ಕದ್ದು.

# ಗಮನಿಸಬೇಕಾದ ದಿನಾಂಕಗಳು

| | | |
|---|---|---|
| 1. | ವಿದ್ಯಾರ್ಥಿಗಳಿಗೆ ಆನ್‌ಲೈನ್‌ನಲ್ಲಿ ಯು.ಯು.ಸಿ.ಎಂ.ಎಸ್. ತಂತ್ರಾಂಶದ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: | 30.03.2026 |
| 2. | ವಿದ್ಯಾರ್ಥಿಗಳಿಗೆ ರೂ. 500-00 ಹೆಚ್ಚುವರಿ ದಂಡ ಶುಲ್ಕದೊಂದಿಗೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ : | 02.04.2026 |
| 3. | ವಿದ್ಯಾರ್ಥಿಗಳಿಗೆ ರೂ. 1000-00 ಗಳ ವಿಶೇಷ ದಂಡ ಶುಲ್ಕದೊಂದಿಗೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: | 04.04.2026 |
| 4. | ಕಾಲೇಜಿನವರು ಘಟಿಕೋತ್ಸವ ಅರ್ಜಿಗಳನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಕೊನೆಯ ದಿನಾಂಕ: | 06.04.2026 |

ವಿ.ಸೂ.: ಯು.ಯು.ಸಿ.ಎಂ.ಎಸ್. ಮೂಲಕ ಪ್ರವೇಶಾತಿ ಪಡೆದು ಪ್ರಸಕ್ತ ಘಟಿಕೋತ್ಸವವನ್ನು ಹೊರತುಪಡಿಸಿ ಹಿಂದಿನ ಘಟಿಕೋತ್ಸವಗಳಲ್ಲಿ ಪದವಿಗಳಿಗೆ ಅರ್ಹರಾದಂತಹ ವಿದ್ಯಾರ್ಥಿಗಳು ಅರ್ಜಿಗಳನ್ನು ಸಲ್ಲಿಸಬೇಕಾದಲ್ಲಿ, ಸದರಿ ವಿದ್ಯಾರ್ಥಿಗಳಿಗೆ ಅನ್ವಯವಾಗುವ ವಾರ್ಷಿಕ ಹೆಚ್ಚುವರಿ ಶುಲ್ಕ ರೂ. 200-00 ಗಳನ್ನು ತಾಂತ್ರಿಕವಾಗಿ ಯು.ಯು.ಸಿ.ಎಂ.ಎಸ್. ತಂತ್ರಾಂಶದಲ್ಲಿ ಅಳವಡಿಸಲು ಸಾಧ್ಯವಾಗದ ಕಾರಣ, ಅಂತಹ ವಿದ್ಯಾರ್ಥಿಗಳಿಂದ ವಾರ್ಷಿಕ ಹೆಚ್ಚುವರಿ ಶುಲ್ಕವನ್ನು ಸಂಬಂಧಪಟ್ಟ ಕಾಲೇಜಿನವರು ಪ್ರತ್ಯೇಕವಾಗಿ ಪಾವತಿಸಿಕೊಂಡು ವಿಶ್ವವಿದ್ಯಾನಿಲಯಕ್ಕೆ ಪಾವತಿಸುವುದು.

**ವಿದ್ಯಾರ್ಥಿಗಳಿಗೆ ಸೂಚನೆ:**

- 19ನೇ ವಾರ್ಷಿಕ ಘಟಿಕೋತ್ಸವಕ್ಕೆ ಅರ್ಹರಾದ ಎಲ್ಲಾ ವಿದ್ಯಾರ್ಥಿಗಳು ತಮ್ಮ ಯು.ಯು.ಸಿ.ಎಂ.ಎಸ್. ತಂತ್ರಾಂಶದ ಲಾಗಿನ್ ಮೂಲಕವೇ ಘಟಿಕೋತ್ಸವ ಪದವಿ ಪ್ರಮಾಣ ಪತ್ರಕ್ಕಾಗಿ ಅರ್ಜಿಗಳನ್ನು ಸಲ್ಲಿಸುವುದು.
- ತಮ್ಮ ಯು.ಯು.ಸಿ.ಎಂ.ಎಸ್. ಲಾಗಿನ್ ಮೂಲಕ ಸಲ್ಲಿಸಲ್ಪಟ್ಟ ಅರ್ಜಿಯ ಒಂದು ಪ್ರತಿಯನ್ನು ತಪ್ಪದೇ ತಮ್ಮ ಕಾಲೇಜಿಗೆ ಸಲ್ಲಿಸತಕ್ಕದ್ದು.
- ಸದರಿ ಅರ್ಜಿಯೊಂದಿಗೆ 2 ಪಾಸ್‌ಪೋರ್ಟ್ ಅಳತೆಯ ಅಭ್ಯರ್ಥಿಯ ಭಾವಚಿತ್ರಗಳನ್ನು ಲಗತ್ತಿಸಿ ಸಲ್ಲಿಸುವುದು (ಒಂದು ಅರ್ಜಿಯ ಮೇಲೆ ಅಂಟಿಸಿ ಪ್ರಾಂಶುಪಾಲರಿಂದ ದೃಢೀಕರಿಸುವುದು ಹಾಗೂ ಮತ್ತೊಂದು ಭಾವಚಿತ್ರವನ್ನು ಹಾಗೆಯೇ ಲಗತ್ತಿಸಿ ಸಲ್ಲಿಸುವುದು).
- ವಿದ್ಯಾರ್ಥಿಗಳು ತಮ್ಮ ಯು.ಯು.ಸಿ.ಎಂ.ಎಸ್. ಖಾತೆಯಲ್ಲಿ ಅಪ್‌ಲೋಡ್ ಮಾಡಲ್ಪಟ್ಟ ಭಾವಚಿತ್ರ ತಪ್ಪಿದ್ದಲ್ಲಿ ಅಥವಾ ಅಸ್ಪಷ್ಟವಾಗಿದ್ದಲ್ಲಿ ಕೂಡಲೇ ತಮ್ಮ ಯು.ಯು.ಸಿ.ಎಂ.ಎಸ್. ಗೆ ಸರಿಯಾದ / ಸ್ಪಷ್ಟವಾದ ಭಾವಚಿತ್ರ ಅಪ್‌ಲೋಡ್ ಮಾಡಿಕೊಂಡು ಸರಿಪಡಿಸಿಕೊಳ್ಳತಕ್ಕದ್ದು.

**ಕಾಲೇಜಿನವರಿಗೆ ಸೂಚನೆ:**

- ಕಾಲೇಜಿನವರು ಘಟಿಕೋತ್ಸವಕ್ಕೆ ಅರ್ಜಿ ಸಲ್ಲಿಸಲ್ಪಟ್ಟ ತಮ್ಮ ಕಾಲೇಜಿಗೆ ಸಂಬಂಧಿಸಿದ ಪ್ರತಿಯೊಬ್ಬ ವಿದ್ಯಾರ್ಥಿಯಿಂದ ಸದರಿ ವಿದ್ಯಾರ್ಥಿಯ ಭಾವಚಿತ್ರ ಅಂಟಿಸಲ್ಪಟ್ಟ ಒಂದು ಪ್ರತಿ ಮುದ್ರಿತ ಅರ್ಜಿಯನ್ನು ಹಾಗೂ ಒಂದು ಹೆಚ್ಚುವರಿ ಭಾವಚಿತ್ರವನ್ನು ಪಡೆದುಕೊಳ್ಳತಕ್ಕದ್ದು.
- ಅರ್ಜಿಯ ಮೇಲಿನ ಭಾವಚಿತ್ರವನ್ನು ಪ್ರಾಂಶುಪಾಲರಿಂದ ದೃಢೀಕರಿಸುವುದು ಹಾಗೂ ಹೆಚ್ಚುವರಿಯಾಗಿ ಪಡೆದ ಭಾವಚಿತ್ರವನ್ನು ಈ ಅಧಿಸೂಚನೆಯೊಂದಿಗೆ ಲಗತ್ತಿಸಲ್ಪಟ್ಟ ನಮೂನೆಯಲ್ಲಿ ಅಂಟಿಸಿ, ಸೂಚಿತ ವಿವರಗಳನ್ನು ನಮೂದಿಸಿ, ಅರ್ಜಿಗಳನ್ನು ಹಾಗೂ ಭಾವಚಿತ್ರವಿರುವ ನಮೂನೆಗಳನ್ನು ಅರ್ಜಿ ಸಲ್ಲಿಸಲ್ಪಟ್ಟ ವಿದ್ಯಾರ್ಥಿಗಳ ಪಟ್ಟಿಯೊಂದಿಗೆ ಪರೀಕ್ಷಾ ವಿಭಾಗಕ್ಕೆ ದಿನಾಂಕ: 06.04.2026 ರೊಳಗೆ ಸಲ್ಲಿಸತಕ್ಕದ್ದು.

ಘಟಿಕೋತ್ಸವದ ನಿಗದಿತ ಸಮಯ, ದಿನಾಂಕ, ಸ್ಥಳ, ಮುಖ್ಯ ಅತಿಥಿಗಳ ಹೆಸರು ಇತ್ಯಾದಿ ವಿವರಗಳನ್ನು ಮುಂದೆ ತಿಳಿಸಲಾಗುವುದು.

ಆದೇಶದ ಮೇರೆಗೆ

13/3

ಕುಲಸಚಿವರು(ಮೌಲ್ಯಮಾಪನ)

ಕುಲಸಚಿವರು (ಮೌಲ್ಯಮಾಪನ)
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

1. ಪ್ರಾಂಶುಪಾಲರುಗಳು, ಘಟಕ/ಸಂಯೋಜಿತ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಮುಖ್ಯಸ್ಥರು/ಸಂಯೋಜಕರು, ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು :

1. ಮಾನ್ಯ ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
2. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
3. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
4. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. – ಇಂದೇ ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ ಪ್ರಕಟಿಸುವುದು.
5. ಮಾನ್ಯ ಕುಲಸಚಿವರು(ಮೌಲ್ಯಮಾಪನ), ಕರ್ನಾಟಕದ ಎಲ್ಲಾ ವಿಶ್ವವಿದ್ಯಾನಿಲಯಗಳು.
6. ಕಚೇರಿ ಪ್ರತಿ